## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಮಂಜುನಾಥ ಕಪ್ಪಾಳ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ ಇವರ ವಿರುದ್ಧದ ಆರೋಪಗಳ ಕುರಿತು ಇಲಾಖೆ ವಿಚಾರಣೆ, ಸಾಭೀತಾದ ಆರೋಪಗಳಿಗೆ ಅನುಗುಣವಾಗಿ ದಂಡನೆ ವಿಧಿಸುವ ಬಗ್ಗೆ – ಆದೇಶ.

ಓದಲಾಗಿದೆ:-

1) ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 31 ಇಎನ್‌ಕ್ಯೂ 2015 ದಿನಾಂಕ 09.04.2015.
2) ಅಪರ ನಿಬಂಧಕರು ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಇಲಾಖಾ ವಿಚಾರಣೆ ವರದಿ ಸಂಖ್ಯೆ UPLOK-2/DE/205/2015/ ARE-4 ದಿನಾಂಕ 28.06.2018
3) ಮಾನ್ಯ ಉಪ ಲೋಕಾಯುಕ್ತ ರವರ ಶಿಫಾರಸ್ಸು ವರದಿ ಸಂಖ್ಯೆ. UPLOK-2/ DE/ 205/ 2015/ ARE-4 ದಿನಾಂಕ 05.07.2018
4) ಸರ್ಕಾರದ 2ನೇ ಕಾರಣ ಕೇಳುವ ನೋಟೀಸ್ ಸಂಖ್ಯೆ ಗ್ರಾಅಪ 60 ಇಎನ್‌ಕ್ಯೂ 2018 ದಿನಾಂಕ 25.07.2018
5) ಶ್ರೀ ಮಂಜುನಾಥ ಕಪ್ಪಾಳ ಇವರು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ 25.08.2018.

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ: (1) ರಲ್ಲಿ ಓದಲಾದ ದಿನಾಂಕ 09.04.2015ರ ಸರ್ಕಾರದ ಆದೇಶದಲ್ಲಿ 2009-10ನೇ ಸಾಲಿನಲ್ಲಿ ದಾವಣಗೆರೆ ನಗರದ ಸರಸ್ವತಿ ಬಡಾವಣೆಯ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದ ಕೊಠಡಿ ನಿರ್ಮಾಣವನ್ನು ಮಂಜೂರಾದ ಸ್ಥಳದಲ್ಲಿ ನಿರ್ವಹಿಸದೆ ಸಕ್ಷಮ ಪ್ರಾಧಿಕಾರದ ಅನುಮೋದನೆ ಇಲ್ಲದೆ ದಾವಣಗೆರೆ ನಗರದ ಶಿವಕುಮಾರಸ್ವಾಮಿ ಬಡಾವಣೆಯ ವಿದ್ಯಾರ್ಥಿ ನಿಲಯದಲ್ಲಿ ಕೊಠಡಿಗಳನ್ನು ನಿರ್ಮಿಸಿದ್ದು, ಈ ಸಂಬಂಧದ ಎಲ್ಲಾ ದಾಖಲೆಗಳಲ್ಲಿಯೂ ಸಹ ಸರಸ್ವತಿ ಬಡಾವಣೆಯಲ್ಲಿನ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಹೆಚ್ಚುವರಿ ಕೊಠಡಿ ನಿರ್ಮಿಸಿರುವುದಾಗಿ ನಮೂದಿಸಿ ದುರ್ನಡತೆ ಎಸಗಿರುತ್ತಾರೆಂಬ ಆರೋಪಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಅಧಿಕಾರಿಗಳ ವಿರುದ್ಧ ಕರ್ನಾಟಕ ಲೋಕಾಯುಕ್ತ ಕಚೇರಿಯು ತನಿಖೆ ನಡೆಸಿ ಲೋಕಾಯುಕ್ತ ಕಾಯ್ದೆ ಕಲಂ 12(3)ರ ಅನುಸಾರ ಸರ್ಕಾರಕ್ಕೆ ಸಲ್ಲಿಸಿದ್ದ ವರದಿಯಲ್ಲಿ, ಸದರಿಯವರುಗಳ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ನಿಜವೆಂದು ಕಂಡು ಬಂದ ಹಿನ್ನೆಲೆಯಲ್ಲಿ, ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸಲು ಸದರಿ ನಿಯಮಗಳ ನಿಯಮ 14(ಎ) ರನ್ವಯ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲಾಗಿತ್ತು:-

1. ಶ್ರೀ ಮಂಜುನಾಥ ಕಪ್ಪಾಳ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ
2. ಶ್ರೀ ಎಸ್.ಕೆ.ಶಿವಕುಮಾರ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ.

ಸದರಿ ಆದೇಶದ ಅನುಸಾರ ಮಾನ್ಯ ಉಪಲೋಕಾಯುಕ್ತರವರು ಅಪರ ನಿಬಂಧಕರು, ವಿಚಾರಣೆಗಳು-4 ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿರುತ್ತಾರೆ. ಅದರಂತೆ ವಿಚಾರಣಾಧಿಕಾರಿಯವರು ಆಪಾದಿತ ಅಧಿಕಾರಿಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾಗಿ ವಿಚಾರಣೆ ನಡೆಸಿ ವರದಿಯನ್ನು ಮಾನ್ಯ ಉಪಲೋಕಾಯುಕ್ತರವರಿಗೆ ದಿನಾಂಕ 28.06.2018 ರಂದು ಸಲ್ಲಿಸಿದ್ದು, ಮಾನ್ಯ ಉಪ ಲೋಕಾಯುಕ್ತರವರು ವಿಚಾರಣಾ ವರದಿಯನ್ನು ಪರಿಶೀಲಿಸಿ, ಇಲಾಖಾ ವಿಚಾರಣೆಯನ್ನು ಸಮರ್ಪಕವಾಗಿ ನಡೆಸಿರುವುದರಿಂದ ವಿಚಾರಣಾ ವರದಿಗೆ ಸಹಮತಿಸಿ ಆರೋಪದ ಗಂಭೀರತೆಗೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ 05.07.2018 ರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ವಿಚಾರಣಾ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಪ್ರಕರಣದಲ್ಲಿ ಭಾಗಿಯಾಗಿರುವ ಮೇಲ್ಕಂಡ ಇಬ್ಬರು ಆಪಾದಿತರ ಪೈಕಿ ಶ್ರೀ ಎಸ್.ಕೆ.ಶಿವಕುಮಾರ್, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ ಇವರು ಸರ್ಕಾರಿ ಸೇವೆಯಿಂದ ನಿವೃತ್ತಿ ಹೊಂದಿರುವುದರಿಂದ ಇವರಿಗೆ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾದ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ದಿನಾಂಕ: 25.07.2018ರಂದು ಪ್ರಸ್ತಾವನೆಯನ್ನು ಕಳುಹಿಸಲಾಗಿರುತ್ತದೆ.

ಇನ್ನುಳಿದಂತೆ ಪ್ರಕರಣದಲ್ಲಿ ಭಾಗಿಯಾಗಿರುವ ಮತ್ತೊಬ್ಬ ಆಪಾದಿತರಾದ ಶ್ರೀ ಮಂಜುನಾಥ ಕಪ್ಪಾಳ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ ಇವರ ವಿರುದ್ಧದ ಆರೋಪ ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುವುದರಿಂದ ವಿಚಾರಣಾ ವರದಿಯನ್ನು ಆಧರಿಸಿ ಕ್ರಮ ಕೈಗೊಳ್ಳುವ ಪೂರ್ವದಲ್ಲಿ ಸದರಿಯವರಿಗೆ ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸು ಹಾಗೂ ವಿಚಾರಣಾ ವರದಿಯ ಪ್ರತಿಯನ್ನು ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ 25.07.2018ರಂದು 2ನೇ ಕಾರಣ ಕೇಳುವ ನೋಟೀಸಿನೊಂದಿಗೆ ಜಾರಿ ಮಾಡಲಾಗಿತ್ತು.

ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರುಗಳ ವಿರುದ್ಧ ಮಾಡಲಾಗಿರುವ ಆರೋಪಗಳಲ್ಲಿ 2009-10ನೇ ಸಾಲಿನಲ್ಲಿ ದಾವಣಗೆರೆ ನಗರದ ಸರಸ್ವತಿ ಬಡಾವಣೆಯ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದ ಕೊಠಡಿ ನಿರ್ಮಾಣವನ್ನು ಮಂಜೂರಾದ ಸ್ಥಳದಲ್ಲಿ ನಿರ್ವಹಿಸದೆ ಸಕ್ಷಮ ಪ್ರಾಧಿಕಾರದ ಅನುಮೋದನೆ ಇಲ್ಲದೆ ದಾವಣಗೆರೆ ನಗರದ ಶಿವಕುಮಾರಸ್ವಾಮಿ ಬಡಾವಣೆಯ ವಿದ್ಯಾರ್ಥಿ ನಿಲಯದಲ್ಲಿ ಕೊಠಡಿಗಳನ್ನು ನಿರ್ಮಿಸಿದ್ದು, ಈ ಸಂಬಂಧದ ಎಲ್ಲಾ ದಾಖಲೆಗಳಲ್ಲಿಯೂ ಸಹ ಸರಸ್ವತಿ ಬಡಾವಣೆಯಲ್ಲಿನ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಹೆಚ್ಚುವರಿ ಕೊಠಡಿ ನಿರ್ಮಿಸಿರುವುದಾಗಿ ನಮೂದಿಸಿ ದುರ್ನಡತೆ ಎಸಗಿರುತ್ತಾರೆಂದು ಆರೋಪಿಸಲಾಗಿದೆ.

ಮೇಲಿನ ಆರೋಪಗಳಿಗೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆಯಲ್ಲಿ ವಿಚಾರಣಾಧಿಕಾರಿಯವರು ಇಬ್ಬರು ಸಾಕ್ಷಿಗಳ ಹೇಳಿಕೆಗಳು, ಶಿಸ್ತು ಪ್ರಾಧಿಕಾರ ಹಾಗೂ ಆಪಾದಿತರು ಸಲ್ಲಿಸಿದ ಹಲವಾರು ದಾಖಲೆಗಳನ್ನು ಪರಿಶೀಲಿಸಿದ್ದಾರೆ. ದಾಖಲೆಗಳು ಮತ್ತು ಸಾಕ್ಷಿಗಳ ಪರಿಶೀಲನೆಯ ನಂತರ ಆಪಾದಿತರ ವಿರುದ್ಧದ ಆರೋಪವು ಸಾಬೀತಾಗಿದೆ ಎಂದು ನಿರ್ಣಯಿಸಿರುತ್ತಾರೆ.

ವಿಚಾರಣಾ ವರದಿ ಹಾಗೂ ಮಾನ್ಯ ಉಪ ಲೋಕಾಯುಕ್ತರವರ ಶಿಫಾರಸ್ಸಿಗೆ ಪ್ರತಿಯಾಗಿ ಆಪಾದಿತ ಅಧಿಕಾರಿಯಾದ ಶ್ರೀ ಮಂಜುನಾಥ ಕಪ್ಪಾಳ ರವರು ಮೇಲೆ ಕ್ರಮ ಸಂಖ್ಯೆ (5)ರಲ್ಲಿ ಓದಲಾದಂತೆ ಸಲ್ಲಿಸಿದ ಲಿಖಿತ ಹೇಳಿಕೆಯಲ್ಲಿ 2009-10ನೇ ಸಾಲಿನಲ್ಲಿ ಬಿ.ಸಿ.ಎಂ. ಹಾಸ್ಟೆಲ್‌ಗಾಗಿ

ಎರಡು ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲು ಬಿ.ಸಿ.ಎಂ. ಇಲಾಖೆಯ ವಿಸ್ತರಣಾಧಿಕಾರಿಗಳಾದ ಶ್ರೀ ಬಸವರಾಜಪ್ಪ ಇವರು ತೋರಿಸಿದ ಸ್ಥಳದಲ್ಲಿಯೇ ಎರಡು ಹೆಚ್ಚುವರಿ ಕೊಠಡಿಗಳನ್ನು ಮಂಜೂರಾದ ಅಂದಾಜು ಪಟ್ಟಿಯಂತೆ ನಿರ್ಮಿಸಲಾಗಿದೆ ಎಂದು, ಇದಕ್ಕಾಗಿ ಮಂಜೂರಾದ ರೂ. 4.9 ಲಕ್ಷಗಳನ್ನು ಸಮರ್ಪಕವಾಗಿ ಬಳಸಿಕೊಂಡಿರುವುದಾಗಿ, ಕಾಮಗಾರಿ ಹೆಸರನ್ನು ತಪ್ಪಾಗಿ ನಮೂದಾದ ಬಗ್ಗೆ ಕಾಮಗಾರಿ ವಹಿಸಿದ ಪ್ರಾಧಿಕಾರವು ಯಾವುದೇ ತಿದ್ದುಪಡಿ ಮಾಡದೇ ಇದ್ದುದರಿಂದ ಬಿಲ್ ತಪ್ಪಾದ ಕಾಮಗಾರಿ ಹೆಸರಿನಲ್ಲಿ ಪಾವತಿಯಾಗಿದೆಯೆಂದು, ಸರಸ್ವತಿ ಬಡಾವಣೆಯಲ್ಲಿ ಬಿ.ಸಿ.ಎಂ. ಹಾಸ್ಟೆಲ್ ಇಲ್ಲವೆಂದು, ಶಿವಕುಮಾರಸ್ವಾಮಿ ಬಡಾವಣೆಯಲ್ಲಿ ಬಿ.ಸಿ.ಎಂ. ಹಾಸ್ಟೆಲ್ ಇರುವುದರಿಂದ ಕಾಮಗಾರಿಯನ್ನು ಮಂಜೂರಾದ ಸ್ಥಳದಲ್ಲಿಯೇ ಮಾಡಲಾಗಿದೆಯೆಂದು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರು ಆಡಳಿತಾತ್ಮಕ ಮಂಜೂರಾತಿ ನೀಡಿದ ಆದೇಶ ದಿನಾಂಕ: 29.11.2009ರಲ್ಲಿ ವೃತ್ತಿಪರ ಬಾಲಕರ ಹಾಸ್ಟೆಲ್‌ಗಾಗಿ ಎರಡು ಹೆಚ್ಚುವರಿ ಕೊಠಡಿಗಳನ್ನು ನಿರ್ಮಿಸಲು ಮಂಜೂರಾತಿ ನೀಡಿದ್ದು, ಅದರಲ್ಲಿ ಬಡಾವಣೆ ಹೆಸರು ನಮೂದಾಗಿರುವುದಿಲ್ಲವೆಂದು, ಬಿಲ್ ಪಾವತಿಯಲ್ಲಿ ಮಾತ್ರ ತಪ್ಪಾದ ಕಾಮಗಾರಿ ಹೆಸರು ನಮೂದಾಗಿದ್ದು, ಸರ್ಕಾರದ ಹಣ ದುರುಪಯೋಗವಾಗಿರುವುದಿಲ್ಲ ವಾದ್ದರಿಂದ ತಮ್ಮ ಮೇಲಿನ ಶಿಸ್ತು ಕ್ರಮವನ್ನು ಕೈಬಿಡಬೇಕೆಂದು ಕೋರಿರುತ್ತಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಲಭ್ಯವಿರುವ ವಿಚಾರಣಾ ವರದಿ, ದಾಖಲೆಗಳು, ಸಾಕ್ಷಿಗಳ ಹೇಳಿಕೆಗಳನ್ನು ಸರ್ಕಾರವು ಪರಿಗಣಿಸಿರುತ್ತದೆ. ಶ್ರೀ ಮಂಜುನಾಥ ಕಪ್ಪಾಳಿ ಇವರ ಲಿಖಿತ ವಿವರಣೆಗೆ ಸಂಬಂಧಿಸಿದಂತೆ ಪರಿಶೀಲಿಸಲಾಗಿ, ಕಾಮಗಾರಿ ಅನುಷ್ಠಾನಗೊಳಿಸುವ ಸಂಬಂಧ ಪ್ರಥಮವಾಗಿ ತಯಾರಿಸಿದ ಅಂದಾಜು ಪಟ್ಟಿಯಿಂದ ಹಿಡಿದು ಅಂತಿಮವಾಗಿ ಬಿಲ್ಲು ಪಾವತಿಸುವವರೆಗಿನ ಎಲ್ಲಾ ದಾಖಲೆಗಳಲ್ಲಿ ದಾವಣಗೆರೆ ನಗರದ ಸರಸ್ವತಿ ಬಡಾವಣೆಯ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದಲ್ಲಿ ಹೆಚ್ಚುವರಿ ಕೊಠಡಿ ನಿರ್ಮಿಸುವ ಬಗ್ಗೆ ನಮೂದಿಸಿದ್ದು, ವಾಸ್ತವವಾಗಿ ಸದರಿ ಸ್ಥಳದಲ್ಲಿ ಕೊಠಡಿ ನಿರ್ಮಿಸದೆ ಶಿವಕುಮಾರಸ್ವಾಮಿ ಬಡಾವಣೆಯಲ್ಲಿನ ವಸತಿ ನಿಲಯದಲ್ಲಿ ಕೊಠಡಿಗಳನ್ನು ನಿರ್ಮಿಸುವ ಕುರಿತು ಯಾವುದೇ ಮಂಜೂರಾತಿಯನ್ನು ಪಡೆದಿರುವುದಿಲ್ಲ ಅಥವಾ ಘಟನೋತ್ತರ ಅನುಮೋದನೆ ಪಡೆದಿರುವುದಿಲ್ಲ. ಹಾಗಾಗಿ ಆಪಾದಿತರು ಸಂಬಂಧಿಸಿದ ಎಲ್ಲಾ ದಾಖಲೆಗಳಲ್ಲಿ ನಮೂದಿಸಿದಂತೆ ಮಂಜೂರಾದ ಸ್ಥಳದಲ್ಲಿ ಕಾಮಗಾರಿ ನಿರ್ವಹಿಸದೇ ಬೇರೊಂದು ಸ್ಥಳದಲ್ಲಿ ನಿರ್ಮಿಸಿದ್ದರೂ ಸಹ ಅಳತೆ ಪುಸ್ತಕ ಹಾಗೂ ಇತರೆ ದಾಖಲೆಗಳಲ್ಲಿ ಸುಳ್ಳು ವಿವರಗಳನ್ನು ದಾಖಲಿಸಿ ಹಣ ಪಾವತಿಸಿ ಗಂಭೀರ ಸ್ವರೂಪದ ಕರ್ತವ್ಯ ಲೋಪ / ದುರ್ನಡತೆ ಎಸಗಿರುವುದು ಸ್ಪಷ್ಟವಾಗಿರುತ್ತದೆ. ಹಾಗಾಗಿ ಆಪಾದಿತರ ಲಿಖಿತ ಹೇಳಿಕೆಯಲ್ಲಿ ಪರಿಗಣನಾರ್ಹವಾದ ಅಂಶಗಳು ಕಂಡುಬರುವುದಿಲ್ಲ. ಅಲ್ಲದೆ ಸದರಿ ಆಪಾದಿತ ಅಧಿಕಾರಿಯ ವಿರುದ್ಧದ ಆರೋಪವು ಲೋಕಾಯುಕ್ತ ಕಚೇರಿಯು ಕೈಗೊಂಡ ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿರುವ ಹಿನ್ನೆಲೆಯಲ್ಲಿ ಸಾಬೀತಾದ ಆರೋಪದ ಗಂಭೀರತೆಗೆ ಅನುಗುಣವಾಗಿ ಸದರಿಯವರಿಗೆ ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

<u>ಆದೇಶ ಸಂಖ್ಯೆ. ಗ್ರಾಅಪ 60 ಇಎನ್‌ಕ್ಯೂ 2018, ಬೆಂಗಳೂರು, ದಿನಾಂಕ. 22.12.2018</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಮಂಜುನಾಥ ಕಪ್ಪಾಳಿ, ಅಂದಿನ ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ (ಹಾಲಿ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊನ್ನಾಳಿ) ಇವರ ವಿರುದ್ಧದ ಸಾಬೀತಾದ ಆರೋಪದ ಗಂಭೀರತೆಗೆ ಅನುಗುಣವಾಗಿ ಸದರಿಯವರ ಕಾಲಿಕ ವೇತನ ಶ್ರೇಣಿಯಲ್ಲಿ ಸಂಚಿತ ಪರಿಣಾಮ ಹೊಂದುವಂತೆ ನಾಲ್ಕು ಹಂತಗಳನ್ನು ಕೆಳಗಿಳಿಸುವ ದಂಡನೆಯನ್ನು ವಿಧಿಸಿ ಆದೇಶಿಸಿದೆ.

ಮೇಲ್ಕಂಡಂತೆ ಆರೋಪಿತ ಅಧಿಕಾರಿಗೆ ವಿಧಿಸಲಾದ ದಂಡನೆಯನ್ನು ಜಾರಿಗೊಳಿಸಲು ಜರೂರು ಕ್ರಮ ತೆಗೆದುಕೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ ಇವರಿಗೆ ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ), 22/12/2018
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಎಂ.ಎಸ್.ಬಿಲ್ಡಿಂಗ್, ಬೆಂಗಳೂರು.
3. ಅಪರ ನಿಬಂಧಕರು ವಿಚಾರಣೆಗಳು-4, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ದಾವಣಗೆರೆ-(ನೋಂದಾಯಿತ ಅಂಚೆ ಮುಖಾಂತರ).
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
6. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
7. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ದಾವಣಗೆರೆ. (ನೋಂದಾಯಿತ ಅಂಚೆ ಮುಖಾಂತರ).
8. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ದಾವಣಗೆರೆ -(ನೋಂದಾಯಿತ ಅಂಚೆ ಮುಖಾಂತರ).
9. ಶ್ರೀ ಮಂಜುನಾಥ ಕಪ್ಪಾಳ, ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಹೊನ್ನಾಳಿ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ).
11. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
12. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರಿಗೆ.
13. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
14. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.